# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1127 (1201)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ
(ವಿಧಾನಸಭೆಯಿಂದಚುನಾಯಿತರಾದವರು) :

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ನಗರಾಭಿವೃದ್ಧಿ ಸಚಿವರು

ವಿಷಯ : ಒಳಚರಂಡಿ ಮತ್ತು ಕುಡಿಯುವ ನೀರನ್ನು ವ್ಯವಸ್ಥೆ ಕಲ್ಪಿಸುವ ಕುರಿತು

(ಅ) ಬೀದರ್ ನಗರಲ್ಲಿ ಒಳಚರಂಡಿ ಮತ್ತು ಕುಡಿಯುವ ನೀರು ವ್ಯವಸ್ಥೆ ಕಲ್ಪಿಸುವ ಕಾರ್ಯಕ್ಕೆ ಕೈಗೆತ್ತಿಕೊಂಡಿರುವ ಕಾಮಗಾರಿಗಳು ಯಾವುವು;

(ಆ) ಒಳಚರಂಡಿ ನಿರ್ಮಾಣ ಹಂತ 1ರ ಕಾಮಗಾರಿ ಪೂರ್ಣವಾಗಿದ್ದರೂ ಸಾರ್ವಜನಿಕರಿಗೆ ಉಪಯೋಗಕ್ಕೆ ಬಾರದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಯೋಜನೆ ವಿಫಲವಾಗಲು ಕಾರಣಗಳೇನು ;

(ಇ) ಅಮೃತ್ ಯೋಜನೆ ಅಡಿಯಲ್ಲಿ 3 ಹಂತಗಳಲ್ಲಿನ ಕಾಮಗಾರಿಗಳ ಪೈಕಿ ಕೈಗೆತ್ತಿಕೊಂಡ ಕಾಮಗಾರಿಗಳು ಪೂರ್ಣಗೊಂಡಿದೆಯೇ ; ಇದಕ್ಕೆ ತಗುಲಿರುವ ವೆಚ್ಚ ಎಷ್ಟು ; ಈ ಕಾಮಗಾರಿಗಳ ನಿರ್ವಹಣೆ ಸಮರ್ಪಕ ರೀತಿಯಲ್ಲಿ ಆಗದಿರುವುದಕ್ಕೆ ಕಾರಣಗಳೇನು ;

(ಈ) ಬೀದರ್ ನಗರಕ್ಕೆ ಕುಡಿಯುವ ನೀರಿನ್ನು ಪೂರೈಕೆ ಮಾಡಲು ಎಷ್ಟು ಹಂತದ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಈ ಕಾಮಗಾರಿಗಳಿಗೆ ಆಗಿರುವ ವೆಚ್ಚ ಎಷ್ಟು ; ಕಾಮಗಾರಿಗಳು ಯಾವ ಹಂತದಲ್ಲಿದೆ ;

(ಉ) ಬೀದರ್ ನಗರಕ್ಕೆ ಪ್ರತಿ ದಿನ ಕುಡಿಯುವ ನೀರು ಲಭ್ಯವಾಗದೇ ಇರಲು ಕಾರಣಗಳೇನು ; ಪ್ರತಿ ದಿನ ಕುಡಿಯುವ ನೀರು ಪೂರೈಕೆ ಮಾಡಲು ಕೈಗೊಂಡಿರುವ ಶಾಶ್ವತ ಕ್ರಮಗಳೇನು ?